ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001.
ದಿನಾಂಕ:07.10.2017

**ಸಂಖ್ಯೆ: ಕಾಶಿಇ/ಶೈವಿ/84/ಶೈ.ಗು./2017-18**

## ಸುತ್ತೋಲೆ

ವಿಷಯ: ಇಲಾಖಾ ವ್ಯಾಪ್ತಿಯ ಸರ್ಕಾರಿ ಕಾಲೇಜುಗಳಲ್ಲಿ ಫಲಿತಾಂಶವನ್ನು ಹೆಚ್ಚಿಸುವ ನಿಟ್ಟಿನಲ್ಲಿ ವಿಶೇಷ ತರಗತಿಗಳನ್ನು (Remedial Classes) ಕಡ್ಡಾಯವಾಗಿ ನಡೆಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ದಿನಾಂಕ:20/06/2017ರ ಸಮಸಂಖ್ಯೆಯ ಸುತ್ತೋಲೆ.

* * * * * * * * *

ಇಲಾಖಾವ್ಯಾಪ್ತಿಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಫಲಿತಾಂಶವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಯು.ಜಿ.ಸಿ. ಮಾರ್ಗಸೂಚಿಗಳನ್ವಯ ಬೋಧಕರು ತಮ್ಮ ಕಾಲೇಜುಗಳಲ್ಲಿನ ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳು ಅದರಲ್ಲೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಬಡ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನು ಗುರುತಿಸುವುದರೊಂದಿಗೆ ವಿದ್ಯಾರ್ಥಿಗಳು ಯಾವ ವಿಷಯದಲ್ಲಿ (Subject) ಅನುತ್ತೀರ್ಣರಾಗಿರುತ್ತಾರೋ ಆ ವಿಷಯದ ಅಧ್ಯಾಪಕರು ಇದರ ಸಂಪೂರ್ಣ ಜವಾಬ್ದಾರಿಯನ್ನು ಹೊರುವುದರೊಂದಿಗೆ ಅಂತಹ ವಿದ್ಯಾರ್ಥಿಗಳಿಗೆ ವೈಯಕ್ತಿಕ ಕಾಳಜಿವಹಿಸಿ ಬಿಡುವಿನ ವೇಳೆಯಲ್ಲಿ ಕನಿಷ್ಠ 01 ತಿಂಗಳು ವಿಶೇಷ ತರಗತಿಗಳನ್ನು (Remedial Classes) ನಡೆಸಿ, ಫಲಿತಾಂಶವನ್ನು ಉತ್ತಮಪಡಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಇಲಾಖೆಯ ಹಿಂದಿನ ಅನೇಕ ಸುತ್ತೋಲೆಗಳಲ್ಲಿ ಸೂಚಿಸಲಾಗಿರುತ್ತದೆ.

ಆದಾಗ್ಯೂ ಅನೇಕ ಕಾಲೇಜುಗಳಲ್ಲಿ ವಿಶೇಷ ತರಗತಿಗಳನ್ನು (Remedial Classes) ನಡೆಸದೇ ಇರುವುದನ್ನು ಗಮನಿಸಲಾಗಿದೆ. ಆದ್ದರಿಂದ ಈ ಬಗ್ಗೆ ಸಂಬಂಧಿಸಿದ ಅಧ್ಯಾಪಕರುಗಳು ಮತ್ತು ಪ್ರಾಂಶುಪಾಲರು ತಮ್ಮ ವೈಯಕ್ತಿಕ ಗಮನಹರಿಸಿ ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳನ್ನು ಗುರುತಿಸಿ ಬಿಡುವಿನ ವೇಳೆಯಲ್ಲಿ ಕನಿಷ್ಠ 01 ತಿಂಗಳು ವಿಶೇಷ ತರಗತಿಗಳನ್ನು (Remedial Classes) ನಡೆಸಿ, ಫಲಿತಾಂಶವನ್ನು ಉತ್ತಮಪಡಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತೊಮ್ಮೆ ಸೂಚಿಸಲಾಗಿದೆ. ಈ ಬಗ್ಗೆ ಉದಾಸೀನತೆ ತೋರಿದಲ್ಲಿ ಸಂಬಂಧಿಸಿದ ಅಧ್ಯಾಪಕರುಗಳು ಮತ್ತು ಪ್ರಾಂಶುಪಾಲರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ತಿಳಿಸಲಾಗಿದೆ.

**(ಮಾನ್ಯ ಆಯುಕ್ತರ ಆದೇಶದನ್ವಯ)**

***ಕಾಲೇಜು ಶಿಕ್ಷಣ ನಿರ್ದೇಶಕರು***

**ಇವರಿಗೆ:**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗ – ಮಾಹಿತಿ ಮತ್ತು ಅಗತ್ಯಕ್ರಮಕ್ಕಾಗಿ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅಗತ್ಯಕ್ರಮಕ್ಕಾಗಿ. ***(ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ)***
3) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.

**ಪ್ರತಿ:**

1) ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಹಾಗೂ ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
2) ಕಛೇರಿ ಪ್ರತಿ.